# ರೆಸ್ಟೋರೆಂಟ್‌ಗೆ ಬಾಂಬ್ ಬೆದರಿಕೆ ಕರೆ: ಬಂಧನ

## ಸಂಬಳ ನೀಡದಿದ್ದಕ್ಕೆ ನೌಕರನಿಂದ ಬೆದರಿಕೆ

**ಬೆಂಗಳೂರು:** ಸಂಬಳ ಕೊಡಲಿಲ್ಲ ಎಂಬ ಕಾರಣಕ್ಕೆ ಸಿಟ್ಟಿಗೆದ್ದು ರೆಸ್ಟೋರೆಂಟ್ ಒಂದಕ್ಕೆ ಬಾಂಬ್ ಬೆದರಿಕೆ ಹಾಕಿದ್ದ ಅಲ್ಲಿನ ನೌಕರನನ್ನು ಮಹದೇವಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಾಣಸವಾಡಿ ನಿವಾಸಿ ವೇಲು ಬಂಧಿತ ಆರೋಪಿ. ಮಹದೇವಪುರ ಠಾಣಾ ವ್ಯಾಪ್ತಿಯ ಪಾಸ್ತಾ ಸ್ಟ್ರೀಟ್ ರೆಸ್ಟೋರೆಂಟ್‌ಗೆ ಬುಧವಾರ ರಾತ್ರಿ ಬಾಂಬ್ ಬೆದರಿಕೆ ಕರೆ ಮಾಡಿದ್ದ ಆತ ಅದೇ ರೆಸ್ಟೋರೆಂಟ್‌ನಲ್ಲಿ ನೌಕರನಾಗಿದ್ದ. ವೇತನ ನೀಡದ ಕಾರಣ ಮದ್ಯ ಸೇವನೆ ಮಾಡಿ ರೆಸ್ಟೋರೆಟ್‌ಗೆ ಬಾಂಬ್ ಇಟ್ಟಿರುವುದಾಗಿ ಬೆದರಿಕೆ ಹಾಕಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಬುಧವಾರ ರಾತ್ರಿ ಪಾಸ್ತಾ ಸ್ಟ್ರೀಟ್‌ನ ರೆಸ್ಟೋರೆಂಟ್‌ಗೆ ಕರೆ ಮಾಡಿದ್ದ ವ್ಯಕ್ತಿಯೊಬ್ಬ, ರೆಸ್ಟೋರೆಂಟ್‌ನಲ್ಲಿ ಬಾಂಬ್ ಇಡಲಾಗಿದ್ದು, ಶೀಘ್ರವೇ ಸ್ಫೋಟವಾಗಲಿದೆ ಎಂದು ಹೇಳಿದ್ದ. ಇದರಿಂದ ಬೆಚ್ಚಿ ಬಿದ್ದ ರೆಸ್ಟೋರೆಂಟ್ ಸಿಬ್ಬಂದಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದರು. ಅದರಂತೆ ಸ್ಥಳಕ್ಕೆ ಧಾವಿಸಿದ ಪೊಲೀಸರು ಶ್ವಾನದಳ, ಬಾಂಬ್ ನಿಷ್ಕ್ರಿಯ ದಳದ ಅಧಿಕಾರಿಗಳನ್ನು ಕರೆಸಿ ರಾತ್ರಿ ಪೂರ್ತಿ ರೆಸ್ಟೋರೆಂಟ್ ಪರಿಶೀಲನೆ ನಡೆಸಿದರೂ ಬಾಂಬ್ ಸಿಗದೆ ಇದೊಂದು ಹುಸಿ ಕರೆ ಎಂದು ಗೊತ್ತಾಯಿತು.



ಲೋಕಸಭಾ ಚುನಾವಣೆಗೆ ಈಗಾಗಲೇ ಅಭ್ಯರ್ಥಿಗಳನ್ನು ಘೋಷಿಸಿರುವ ಅಖಿಲ ಭಾರತ ಹಿಂದೂ ಮಹಾಸಭಾ ಪಕ್ಷ ಅಭ್ಯರ್ಥಿಗಳಿಗೆ ಬಿ ಫಾರಂ ವಿತರಿಸಿದೆ. ಪಕ್ಷದ ರಾಜ್ಯಾಧ್ಯಕ್ಷ ಡಾ.ಮನೋಜ್ ಅಲಂಗಲ್ 28 ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳಿಗೆ ಬಿ ಫಾರಂ ವಿತರಿಸಿದರು. ಈ ವೇಳೆ ಪಕ್ಷದ ರೈತ ರಾಜ್ಯಾಧ್ಯಕ್ಷೆ ಸುಮತಿ, ವಿನೋದ್ ಕುಮಾರ್ ಇದ್ದರು.

# ಶಿವರಾಜ್‌ಕುಮಾರ್ ಸಿನಿಮಾ ನಿಷೇಧ ಸಾಧ್ಯವಿಲ್ಲ

**ಬೆಂಗಳೂರು:** ನಟ ಶಿವರಾಜ್‌ಕುಮಾರ್ ಅವರು ಅಭಿನಯಿಸಿದ ಚಿತ್ರ ಹಾಗೂ ಜಾಹೀರಾತುಗಳನ್ನು ನಿಷೇಧಿಸಬೇಕು ಎನ್ನುವ ಬಿಜೆಪಿ ಮನವಿಯನ್ನು ತಿರಸ್ಕರಿಸಿರುವ ಚುನಾವಣಾ ಆಯೋಗ, ಈ ರೀತಿ ನಿರ್ಬಂಧಿಸಲು ಸಾಧ್ಯವಿಲ್ಲ ಎಂದಿದೆ. ಆದರೆ, ಸರಕಾರಿ ಒಡೆತನದ ದೂರದರ್ಶನ ಹಾಗೂ ಡಿಡಿ ಚಂದನದಲ್ಲಿ ಮಾತ್ರ ಶಿವರಾಜ್‌ಕುಮಾರ್ ಅವರ ಸಿನಿಮಾ ಪ್ರಸಾರವನ್ನು ನಿರ್ಬಂಧಿಸಬಹುದು ಎಂದು ತಿಳಿಸಿದೆ. ನಟ ಶಿವರಾಜ್ ಕುಮಾರ್ ಕಾಂಗ್ರೆಸ್ ಪರ ಪ್ರಚಾರ ಮಾಡುತ್ತಿರುವ ಹಿನ್ನೆಲೆಯಲ್ಲಿ ಚುನಾವಣಾ ಅವಧಿಯಲ್ಲಿ ಅವರ ಸಿನಿಮಾ ಮತ್ತು ಜಾಹೀರಾತುಗಳ ಪ್ರಸಾರವನ್ನು ನಿರ್ಬಂಧಿಸಬೇಕು ಎಂದು ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾದ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ದೂರು ನೀಡಿದ್ದರು. ಜನಪ್ರಿಯ ಸಿನಿಮಾ ನಟರಾಗಿರುವ ಕಾರಣ ಶಿವರಾಜ್‌ಕುಮಾರ್ ಜನರ ಮೇಲೆ ಪ್ರಭಾವ ಬೀರುತ್ತಾರೆ. ಆದ್ದರಿಂದ ಅವರ ಸಿನಿಮಾ ಪ್ರಸಾರಕ್ಕೆ ತಡೆ ನೀಡಬೇಕು ಎಂದು ದೂರು ನೀಡಿದ್ದರು. ಬಿಜೆಪಿ ಮುಖಂಡ ನೀಡಿದ್ದ ದೂರಿಗೆ ಪ್ರತಿಯಾಗಿ ಚುನಾವಣಾ ಆಯೋಗ ಈ ನಿರ್ಧಾರ ಕೈಗೊಂಡಿದೆ. ಚುನಾವಣೆಗೆ ಸ್ಪರ್ಧಿಸಿರುವ ನಟರಿರುವ ಸಿನಿಮಾಗಳು ಮತ್ತು ಜಾಹೀರಾತುಗಳ ಪ್ರಸಾರವನ್ನು ಖಾಸಗಿ ಟಿವಿ ಚಾನೆಲ್‌ಗಳು ಅಥವಾ ಚಿತ್ರಮಂದಿರಗಳಲ್ಲಿ ನಿರ್ಬಂಧಿಸಲಾಗುವುದಿಲ್ಲ ಎಂದು ಭಾರತೀಯ ಚುನಾವಣಾ ಆಯೋಗ ತನ್ನ ನಿರ್ದೇಶನದಲ್ಲಿ ನೀಡಿದೆ. ಅದೇ ಅಂಶವನ್ನು ರಾಜ್ಯ ಚುನಾವಣಾ ಅಧಿಕಾರಿಗಳು ತಮ್ಮ ಪ್ರತಿಕ್ರಿಯೆಯಲ್ಲಿ ಉಲ್ಲೇಖಿಸಿದ್ದಾರೆ.

## ಸಮಾಚಾರ ಸಣ್ಣದಲ್ಲ

### ಪತ್ರಕರ್ತೆ ಮೇಲೆ ಪತ್ರಕರ್ತನಿಂದ ಹಲ್ಲೆ

**ಬೆಂಗಳೂರು:** ರಾಷ್ಟ್ರೀಯ ಸುದ್ದಿ ಸಂಸ್ಥೆಗಳ ಇಬ್ಬರು ಪತ್ರಕರ್ತರು ಜಗಳವಾಡಿಕೊಂಡು ಪಿಟಿಐ ಸುದ್ದಿ ಸಂಸ್ಥೆಯ ವರದಿಗಾರ್ತಿ ಮೇಲೆ ಎನ್‌ಐಎ ಸುದ್ದಿ ಸಂಸ್ಥೆಯ ವರದಿಗಾರ ಹಲ್ಲೆ ಮಾಡಿರುವ ಘಟನೆ ರಾಮನಗರದಲ್ಲಿ ಬುಧವಾರ ನಡೆದಿದೆ.



ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್ ನಾಮಪತ್ರ ಸಲ್ಲಿಸುವ ಸಂದರ್ಭ ಡಿ.ಕೆ.ಶಿವಕುಮಾರ್ ಸುದ್ದಿಗೋಷ್ಠಿ ನಡೆಸುವ ವೇಳೆ ಈ ಘಟನೆ ನಡೆದಿದ್ದು, ಪಿಟಿಐ ವರದಿಗಾರ್ತಿ ಎಲಿಜಬೆತ್ ಎಂಬುವರ ಮೇಲೆ ಎನ್‌ಐಎ ವರದಿಗಾರ ರಾಘವೇಂದ್ರ ಹಲ್ಲೆ ಮಾಡಿದ್ದಾರೆ. ಈ ವೇಳೆ ಸುತ್ತಮುತ್ತ ಇದ್ದವರು ರಾಘವೇಂದ್ರ ಅವರನ್ನು ತಡೆದು ಎಲಿಜಬೆತ್ ಅವರನ್ನು ಪಾರು ಮಾಡಿದ್ದಾರೆ ಎಂದು ತಿಳಿದು ಬಂದಿದೆ. ಪ್ರಕರಣ ಸಂಬಂಧ ತನಿಖೆ ಪೂರ್ಣಗೊಳ್ಳುವವರೆಗೂ ತನ್ನ ವರದಿಗಾರ ರಾಘವೇಂದ್ರ ಅವರನ್ನು ಎನ್‌ಐಎ ಸೇವೆಯಿಂದ ಅಮಾನತು ಮಾಡಿದೆ. ಈ ಮಧ್ಯೆ ಮಹಿಳಾ ವರದಿಗಾರ್ತಿ ಮೇಲೆ ಹಲ್ಲೆ ಮಾಡಿರುವ ವರದಿಗಾರನ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ರಾಷ್ಟ್ರೀಯ ಮಹಿಳಾ ಆಯೋಗದ ಸದಸ್ಯೆ ಖುಷ್ಬೂ ಸುಂದರ್ ಆಗ್ರಹಿಸಿದ್ದಾರೆ.

### 10ನೇ ಪರೀಕ್ಷೆ ಬಳಿಕ ಜಗಳ: ಚಾಕು ಇರಿತ

**ಬೆಂಗಳೂರು:** ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆದ ಬಳಿಕ ವಿದ್ಯಾರ್ಥಿಗಳ ಮಧ್ಯೆ ಮಾರಾಮಾರಿ ನಡೆದು ಮೂವರು ವಿದ್ಯಾರ್ಥಿಗಳಿಗೆ ಚಾಕುವಿನಿಂದ ಇರಿದ ಘಟನೆ ರಾಗಿಗುಡ್ಡದ ಬಳಿ ನಡೆದಿದೆ.

ಪರೀಕ್ಷಾ ಕೊಠಡಿಯ ಹೊರಗೆ ಬ್ಯಾಗ್ ಇಡುವ ವಿಚಾರಕ್ಕೆ ರಾಗಿ ಗುಡ್ಡ ಹಾಗೂ ಸಾರಕ್ಕಿ ಬಳಿ ಇರುವ ಶಾಲಾ ವಿದ್ಯಾರ್ಥಿಗಳ ನಡುವೆ ಜಗಳವಾಗಿತ್ತು. ಪರೀಕ್ಷೆ ಮುಗಿಸಿ ಮನೆಗೆ ಹೋಗುವಾಗ ಎರಡು ಶಾಲೆಗಳ ಮಕ್ಕಳು ಪರಸ್ಪರ ಹೊಡೆದಾಡಿಕೊಂಡಿದ್ದಾರೆ. ಈ ವೇಳೆ ಮೂವರು ವಿದ್ಯಾರ್ಥಿಗಳಿಗೆ ಚಾಕುವಿನಿಂದ ಇರಿಯಲಾಗಿದೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡಿರುವ ಜೆ.ಪಿ.ನಗರ ಠಾಣೆ ಪೊಲೀಸರು ಐವರು ವಿದ್ಯಾರ್ಥಿಗಳನ್ನು ವಶಕ್ಕೆ ಪಡೆದಿದ್ದು, ಕೊಲೆ ಯತ್ನ ಆರೋಪದಡಿ ಪ್ರಕರಣ ದಾಖಲಿಸಲಾಗಿದೆ.

ಖಾಸಗಿ ಶಾಲೆಯೊಂದರಲ್ಲಿ ಎಸ್‌ಎಸ್‌ಎಲ್ಸಿ ಪರೀಕ್ಷೆ ಬರೆಯಲು ಬಂದಿದ್ದ ಎರಡು ಶಾಲೆಯ ಮಕ್ಕಳು ಬ್ಯಾಗ್ ಇಡುವ ವಿಚಾರದಲ್ಲಿ ಪರೀಕ್ಷಾ ಕೇಂದ್ರದಲ್ಲಿ ಜಗಳ ನಡೆಸಿದ್ದಾರೆ. ಒಳಗೆ ಜಗಳವಾಡಿ ಅದೇ ದ್ವೇಷದಿಂದ ಹಿಂಬಾಲಿಸಿ ಬಂದಿದ್ದ ರಾಗಿ ಗುಡ್ಡ ಬಳಿ ಇರುವ ಶಾಲಾ ಬಾಲಕರು, ಮಧ್ಯಾಹ್ನ 1.45ರ ವೇಳೆಗೆ ಸಾರಕ್ಕಿ ಬಳಿ ಇರುವ ಶಾಲೆಯ ಮೂವರು ವಿದ್ಯಾರ್ಥಿಗಳಿಗೆ ಚಾಕುವಿನಿಂದ ಇರಿದು ಪರಾರಿಯಾಗಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

### ನಗರದಲ್ಲಿ ಗರಿಷ್ಠ ತಾಪಮಾನ ದಾಖಲು

**ಬೆಂಗಳೂರು:** ನಗರದ ವಾತಾವರಣದಲ್ಲಿ ಉಷ್ಣತೆ ಹೆಚ್ಚಳವಾಗುತ್ತಿದ್ದು, ಗುರುವಾರ (ಮಾ.28) ಗರಿಷ್ಠ ತಾಪಮಾನ 37.9 ಡಿಗ್ರಿ ಸೆಲ್ಸಿಯಸ್‌ಗೆ ತಲುಪಿದೆ. ಇದು ಕಳೆದ 7 ವರ್ಷಗಳಲ್ಲಿ ಈ ದಿನ ವರದಿಯಾದ ಗರಿಷ್ಠ ತಾಪಮಾನವಾಗಿದೆ.



ಈ ತಿಂಗಳು ನಗರದ ತಾಪಮಾನದಲ್ಲಿ ಭಾರಿ ಹೆಚ್ಚಳವಾಗಿದ್ದು, ಕಳೆದೊಂದು ವಾರದಿಂದ ಗರಿಷ್ಠ ತಾಪಮಾನ 36 ಡಿಗ್ರಿ ಸೆಲ್ಸಿಯಸ್, ಕನಿಷ್ಠ ತಾಪಮಾನ 22 ಡಿಗ್ರಿ ಸೆಲ್ಸಿಯಸ್ ವರದಿಯಾಗಿದೆ. ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕು ದಿನಗಳು ಸಹ ಗರಿಷ್ಠ ಹಾಗೂ ಕನಿಷ್ಠ ತಾಪಮಾನ ಇಷ್ಟೇ ಪ್ರಮಾಣದಲ್ಲಿ ಇರುವ ಸಾಧ್ಯತೆಯಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರದ ಪ್ರಕಾರ 2017ರ ಮಾ.28ರಂದು 37.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ತಾಪಮಾನ ವರದಿಯಾಗಿತ್ತು. 2018ರಲ್ಲಿ ಈ ದಿನ 36.6 ಡಿಗ್ರಿ ಸೆಲ್ಸಿಯಸ್, 2019ರಲ್ಲಿ 37.5 ಡಿಗ್ರಿ ಸೆಲ್ಸಿಯಸ್, 2020ರಲ್ಲಿ 37.1 ಡಿಗ್ರಿ ಸೆಲ್ಸಿಯಸ್, 2021ರಲ್ಲಿ 37.4 ಡಿಗ್ರಿ ಸೆಲ್ಸಿಯಸ್, 2022ರಲ್ಲಿ 36.7 ಡಿಗ್ರಿ ಸೆಲ್ಸಿಯಸ್ ಹಾಗೂ 2023ರಲ್ಲಿ 36.9 ಡಿಗ್ರಿ ಸೆಲ್ಸಿಯಸ್ ವರದಿಯಾಗಿದೆ.

ವಿಶ್ವವಾಣಿ ಆರಾಮ
ಅನುದಿನವೂ ವಿರಾಮಕ್ಕೆ ಒಂದು ನೆಪ
ಪ್ರತಿದಿನ ಆರಾಮದಿಂದ ಓದಿ

# ರೌಡಿ ದಿನೇಶ್ ಕೊಲೆ: 12 ಆರೋಪಿಗಳ ಬಂಧನ

## ಸಂಚು ರೂಪಿಸಿ ಹತ್ಯೆ ಮಾಡಿದ ದುಷ್ಕರ್ಮಿಗಳು | ಪ್ರಕರಣದ ತನಿಖೆಗಾಗಿ ನಾಲ್ಕು ವಿಶೇಷ ತಂಡ ರಚನೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಬುಧವಾರ ಹಾಡಹಗಲೇ ದುಷ್ಕರ್ಮಿಗಳಿಂದ ಹತ್ಯೆಯಾಗಿದ್ದ ರೌಡಿ ದಿನೇಶ್ ಕುಮಾರ್ ಕೊಲೆ ರಹಸ್ಯವನ್ನು ಪೊಲೀಸರು ಬೇಧಿಸಿದ್ದು, ಎದುರಾಳಿಯ ಕೊಲೆಗೆ ಸಂಚು ರೂಪಿಸಿ ಕಟ್ಟಿದ್ದ ಸಹಚರರ ತಂಡದ ಸದಸ್ಯರೇ ಹತ್ಯೆ ಮಾಡಿರುವುದು ಬೆಳಕಿಗೆ ಬಂದಿದೆ. ಪ್ರಕರಣ ಸಂಬಂಧ ಬಾಣಸವಾಡಿ ಪೊಲೀಸರು ಇಬ್ಬರು ರೌಡಿಗಳು ಸೇರಿದಂತೆ 12 ಮಂದಿಯನ್ನು ಬಂಧಿಸಿದ್ದಾರೆ.

ಬಾಣಸವಾಡಿ ಪೊಲೀಸ್ ಠಾಣೆ ವ್ಯಾಪ್ತಿಯ ಸರ್ವೀಸ್ ಅಪಾರ್ಟ್‌ಮೆಂಟ್‌ನಲ್ಲಿ ರೌಡಿ ಶೀಟರ್ ದಿನೇಶ್‌ನನ್ನು ಹತ್ಯೆ ಮಾಡಿದ ಕೆಲವೇ ಗಂಟೆಗಳಲ್ಲಿ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದಾರೆ. ದಿಲೀಪ್ ಸಾಗರ್, ಅಜಯ್ ಕ್ರಿಸ್ಟೋಫರ್, ಅರವಿಂದ, ನಿಖಿಲ್ ಅಲಿಯಾಸ್ ವಿಕ್ಕಿ, ಗೌತಮ್, ದರ್ಶನ್, ಮೆಲ್ವಿನ್, ಕಾರ್ತಿಕ್, ಸತೀಶ್, ಕಿಶೋರ್, ದಿವಾಕರ್, ಶೇಖರ್ ಬಂಧಿತರು. ಹಳೇ ದ್ವೇಷದ ಹಿನ್ನೆಲೆಯಲ್ಲಿ ದಿನೇಶ್‌ನನ್ನು ಕೊಲೆ ಮಾಡಲಾಗಿದೆ. ದಿನೇಶ್ ಕೊಲೆ ಪ್ರಕರಣದ ತನಿಖೆಗೆ ನಾಲ್ಕು ವಿಶೇಷ ತಂಡಗಳನ್ನು ರಚಿಸಲಾಗಿದ್ದು, ಘಟನೆ ನಡೆದ ಕೆಲವೇ ಸಮಯದಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ. ಬಂಧಿತರ ಪೈಕಿ ದಿಲೀಪ್ ಸಾಗರ್ ಕೊತ್ತನೂರು ಪೊಲೀಸ್ ಠಾಣೆ ಮತ್ತು ಅಜಯ್ ಕ್ರಿಸ್ಟೋಫರ್ ರಾಮಮೂರ್ತಿ ಪೊಲೀಸ್ ಠಾಣೆಯಲ್ಲಿ ರೌಡಿ ಪಟ್ಟಿಯಲ್ಲಿದ್ದಾರೆ ಎಂದು ಪೂರ್ವ ವಿಭಾಗದ ಡಿಸಿಪಿ ಕುಲದೀಪ್ ಜೈನ್ ತಿಳಿಸಿದ್ದಾರೆ.

ಬುಧವಾರ ದಿನೇಶ್ ತನ್ನ ಸಹಚರರಾದ ಅರವಿಂದ ಹಾಗೂ ಇನ್ನೊಬ್ಬನ ಜತೆ ದಿಲೀಪ್ ಹತ್ಯೆ ಸಂಚಿನ ಮಾತುಕತೆಗೆಂದು ಬಾಣಸವಾಡಿ ಬಳಿಯ ಸರ್ವಾಸ್ ಅಪಾರ್ಟ್‌ಮೆಂಟ್‌ನಲ್ಲಿ ಕೊಠಡಿ ಪಡೆಯಲು ಬಂದಿದ್ದ. ಆದರೆ, ಅಲ್ಲಿ ನಗದು ಮಾತ್ರ ಸ್ವೀಕರಿಸುತ್ತಿದ್ದ ಕಾರಣ, ನಗದು ತರುವುದಾಗಿ ಎಟಿಎಂಗೆ ಹೋಗುವುದಾಗಿ ಹೇಳಿ ಹೋದ ಅರವಿಂದ ಹಾಗೂ ಆತನ ಸ್ನೇಹಿತ ಉಳಿದವರನ್ನು ಕರೆಸಿ ದಿನೇಶ್‌ನನ್ನು ಹತ್ಯೆ ಮಾಡಿದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

### ಬಂಧಿತ ಆರೋಪಿಗಳು

**ದಿಲೀಪ್ ಸಾಗರ್, ಅಜಯ್ ಕ್ರಿಸ್ಟೋಫರ್, ಅರವಿಂದ, ನಿಖಿಲ್ ಅಲಿಯಾಸ್ ವಿಕ್ಕಿ, ಗೌತಮ್, ದರ್ಶನ್, ಮೆಲ್ವಿನ್, ಕಾರ್ತಿಕ್, ಸತೀಶ್, ಕಿಶೋರ್, ದಿವಾಕರ್, ಶೇಖರ್.**

### ಹಳೇ ವೈಷಮ್ಯದ ಹಿನ್ನೆಲೆ ಕೊಲೆ

**ರೌಡಿ ಶೀಟರ್ ದಿನೇಶ್ ಕುಮಾರ್ ಮತ್ತು ರಾಮಮೂರ್ತಿನಗರದ ರೌಡಿ ದಿಲೀಪ್ ಮಧ್ಯೆ ಹಳೇ ವೈಷಮ್ಯವಿತ್ತು. ಹೀಗಾಗಿ ದಿಲೀಪ್‌ನನ್ನು ಕೊಲೆ ಮಾಡಲು ಮುಂದಾಗಿದ್ದ ದಿನೇಶ್ ಕುಮಾರ್, ಅದಕ್ಕಾಗಿ ಸತೀಶ್ ಅರವಿಂದ , ಗೌತಮ್ ಸೇರಿ ಹತ್ತು ಮಂದಿಯ ತಂಡವೊಂದನ್ನು ಸಿದ್ಧಪಡಿಸಿದ್ದ. ಆದರೆ, ಈ ತಂಡದವರು ದಿಲೀಪ್ ಜತೆಗೂ ಸಂಪರ್ಕದಲ್ಲಿದ್ದು, ದಿನೇಶ್ ಮಾಡಿರುವ ಸಂಚಿನ ಬಗ್ಗೆ ತಿಳಿಸಿದ್ದರು. ಹೀಗಾಗಿ ಆ ತಂಡವನ್ನೇ ಬಳಸಿಕೊಂಡು ದಿನೇಶ್‌ನನ್ನು ದಿಲೀಪ್ ಹತ್ಯೆ ಮಾಡಿಸಿದ್ದಾನೆ.**

# ಕರುಳು ಛಿದ್ರವಾಗಿ ಯುವಕ ಸಾವು

## ಏರ್ ಪ್ರೆಶರ್ ಪೈಪ್‌ನಿಂದ ಗುದದ್ವಾರಕ್ಕೆ ಗಾಳಿ ಬಿಟ್ಟ ಸ್ನೇಹಿತ

ಅಪರಾಧ ಸುದ್ದಿಗಳು

**ಬೆಂಗಳೂರು:** ವ್ಯಕ್ತಿಯೊಬ್ಬ ತನ್ನ ಸ್ನೇಹಿತನ ಗುದದ್ವಾರಕ್ಕೆ ಏರ್ ಪ್ರೆಶರ್ ಪೈಪ್‌ನಿಂದ ಗಾಳಿ ಬಿಟ್ಟ ಪರಿಣಾಮ ಒತ್ತಡ ಹೆಚ್ಚಾಗಿ ಹೊಟ್ಟೆಯೊಳಗಿನ ಕರುಳು ಛಿದ್ರವಾಗಿ ಆತ ಮೃತಪಟ್ಟಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಮೂಲತಃ ದೇವನಹಳ್ಳಿ ತಾಲೂಕಿನವನಾದ ಯೋಗೇಶ್ ಮೃತ ಯುವಕ. ಮಾ.25ರಂದು ಬೈಕ್ ದುರಸ್ತಿಗೆಂದು ಸರ್ವೀಸ್ ಸೆಂಟರ್‌ಗೆ ಹೋಗಿದ್ದಾಗ ಈ ಘಟನೆ ನಡೆದಿದ್ದು, ಪ್ರಕರಣ ಸಂಬಂಧ ಆತನ ಸ್ನೇಹಿತ ಮುರಳಿ ಎಂಬಾತನನ್ನು ಸಂಪಿಗೆಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ತಮಾಷೆಗಾಗಿ ಮುರಳಿ ಮಾಡಿದ ಕೆಲಸ ಆತನ ಸ್ನೇಹಿತನನ್ನೇ ಬಲಿ ಪಡೆದಿದೆ.



ಯೋಗೇಶ್ ಥಣಿಸಂದ್ರದಲ್ಲಿ ಅಜ್ಜಿ ಮನೆಯಲ್ಲಿ ವಾಸವಾಗಿದ್ದು, ಫಾರ್ಮಾ ಕಂಪನಿಯೊಂದರಲ್ಲಿ ಡೆಲಿವರಿ ಬಾಯ್ ಆಗಿ ಕೆಲಸ ಮಾಡುತ್ತಿದ್ದ. ಏಪ್ರಿಲ್‌ನಲ್ಲಿ ಯೋಗೇಶ್ ಸಹೋದರಿಯ ವಿವಾಹ ನಿಶ್ಚಯವಾಗಿತ್ತು. ಹೀಗಾಗಿ ಮದುವೆ ಕೆಲಸ ಕಾರ್ಯಗಳಿಗಾಗಿ ಓಡಾಡುತ್ತಿದ್ದ. ಈ ಮಧ್ಯೆ ತನ್ನ ಬೈಕ್ ಸರ್ವೀಸ್ ಮಾಡಿಸಲು ಯೋಗೇಶ್ ಮಾ. 25ರಂದು ಸಂಜೆ ಥಣಿಸಂದ್ರದ ಸಿಎನ್‌ಎಸ್ ಕಾರ್ ಸ್ಪಾ ಸರ್ವೀಸ್ ಸೆಂಟರ್‌ಗೆ ತೆಗೆದುಕೊಂಡು ಹೋಗಿದ್ದ.

ಅಲ್ಲಿ ಕೆಲಸ ಮಾಡುತ್ತಿದ್ದ ಮುರಳಿ ಎಂಬಾತ ಯೋಗೇಶ್ ಸ್ನೇಹಿತನಾಗಿದ್ದು, ಇಬ್ಬರೂ ಒಬ್ಬರಿಗೊಬ್ಬರು ರೇಗಿಸುತ್ತಾ ಸರ್ವೀಸ್ ಸೆಂಟರ್‌ನಲ್ಲಿದ್ದ ಏರ್ ಪ್ರೆಶರ್‌ನಿಂದ ಮೈಮೇಲೆ ಗಾಳಿ ಬಿಟ್ಟುಕೊಳ್ಳುತ್ತಾ ಆಟವಾಡುತ್ತಿದ್ದರು. ಈ ವೇಳೆ ಚಡ್ಡಿ ಧರಿಸಿದ್ದ ಯೋಗೇಶ್‌ನನ್ನು ನೋಡಿ ಏರ್ ಪ್ರೆಶರ್ ಮೂಲಕ ಏಕಾಏಕಿ ಗುದದ್ವಾರಕ್ಕೆ ಗಾಳಿ ಬಿಟ್ಟಿದ್ದ. ಇದರಿಂದ ಯೋಗೇಶ್‌ನ ಹೊಟ್ಟೆ ಊದಿಕೊಂಡು ಒಳಗೆ ಕರುಳು ಸ್ಫೋಟವಾಗಿ ಪ್ರಜ್ಞೆ ತಪ್ಪಿ ಬಿದ್ದಿದ್ದ. ಕೂಡಲೇ ಮುರಳಿ ಮತ್ತು ಇನ್ನಿತರರು ಆತನನ್ನು ಆಸ್ಪತ್ರೆಗೆ ಸಾಗಿಸಿದರಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾನೆ.

- ಬೈಕ್ ದುರಸ್ತಿಗೆಂದು ಸರ್ವೀಸ್ ಸೆಂಟರ್‌ಗೆ ಹೋಗಿದ್ದ ಮೃತ
- ಒಬ್ಬರಿಗೊಬ್ಬರು ರೇಗಿಸುತ್ತಾ ಏರ್ ಪ್ರೆಶರ್‌ನಿಂದ ಗಾಳಿ ಬಿಟ್ಟ

# ಚೀಟಿ ಹಾಕಿದ್ದವರಿಗೆ ಮೋಸ

**ಬೆಂಗಳೂರು:** ಯುಗಾದಿ ಹಬ್ಬದ ಸಾಮಗ್ರಿ, ಹಾಗೂ ಮಾರನೇ ದಿನಕ್ಕೆ ಮಾಂಸಕ್ಕಾಗಿ ಚೀಟಿ ಹಾಕಿದ್ದ ಸಾವಿರಾರು ಮಂದಿಗೆ ವಂಚಿಸಿ ವ್ಯಕ್ತಿಯೊಬ್ಬ ರಾತ್ರೋರಾತ್ರಿ ಮನೆ ಖಾಲಿ ಮಾಡಿ ಪರಾರಿಯಾಗಿರುವ ದುರ್ಘಟನೆ ಬ್ಯಾಟರಾಯ ನಪುರದಲ್ಲಿ ನಡೆದಿದೆ. ಯುಗಾದಿ ಹಬ್ಬದ ಚೀಟಿ ಹಾಕಿಸಿಕೊಳ್ಳುತ್ತಿದ್ದ ಪುಟ್ಟಸ್ವಾಮಿ ಎಂಬಾತ ಸಾವಿರಾರು ಮಂದಿಯಿಂದ ಹಣ ಕಟ್ಟಿಸಿಕೊಂಡು ವಂಚನೆ ನಡೆಸಿ ಪರಾರಿಯಾಗಿರುವ ಬಗ್ಗೆ ಬ್ಯಾಟರಾಯನಪುರ ಪೊಲೀಸರಿಗೆ ದೂರು ನೀಡಲಾಗಿದೆ.

ಒಬ್ಬೊಬ್ಬರ ಬಳಿ 4 ರಿಂದ 5 ಸಾವಿರ ರು. ಪಡೆದು ಮೋಸ ಮಾಡಿದ್ದಾನೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಕಳೆದ ಎರಡು ವರ್ಷಗಳಿಂದ ಪುಟ್ಟಸ್ವಾಮಿ ಯುಗಾದಿ ಚೀಟಿ ನಡೆಸುತ್ತಿದ್ದು, ಈ ಬಾರಿ ಚೀಟಿ ಸಂಖ್ಯೆನ್ನೂ ಹೆಚ್ಚಿಸಿಕೊಂಡು ಕೋಟ್ಯಂತರ ರು. ವಂಚನೆ ಮಾಡಿದ್ದಾನೆ ಎಂದು ತಿಳಿದು ಬಂದಿದೆ.

# ಸಾಧಕರಿಗೆ ಹವ್ಯಕ ಪ್ರಶಸ್ತಿ ಗರಿ



**ಬೆಂಗಳೂರು:** ಅಖಿಲ ಹವ್ಯಕ ಮಹಾಸಭೆಯ 81ನೇ ವರ್ಷದ ಸಂಸ್ಥಾಪನೋತ್ಸವ ಆಚರಿಸಲಾಗುತ್ತಿದ್ದು, ವಾರ್ಷಿಕ ಹವ್ಯಕ ವಿಶೇಷ ಪ್ರಶಸ್ತಿಗೆ ಎಂಟು ಸಾಧಕರನ್ನು ಆಯ್ಕೆ ಮಾಡಲಾಗಿದೆ. ಮಲ್ಲೇಶ್ವರದಲ್ಲಿರುವ ಹವ್ಯಕ ಭವನದಲ್ಲಿ ಮಾ.31 ಭಾನುವಾರದಂದು ಸಂಜೆ 4ಕ್ಕೆ ನಡೆಯುವ 81ನೇ ಸಂಸ್ಥಾಪನೋತ್ಸವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ನಡೆಯಲಿದೆ. ಕೆಲವು ಮಾನದಂಡಗಳ ಆಧಾರದ ಮೇಲೆ ಕಲೆ, ಸಾಹಿತ್ಯ, ಸಂಗೀತ, ಸಮಾಜ ಸೇವೆ, ಪರಿಸರ ಸೇರಿದಂತೆ ಇನ್ನಿತರ ಕ್ಷೇತ್ರಗಳ ಸಾಧಕರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಅಖಿಲ ಹವ್ಯಕ ಮಹಾಸಭೆ ತಿಳಿಸಿದೆ.

| ಸಾಧಕರು | ಪ್ರಶಸ್ತಿ | ಕ್ಷೇತ್ರ |
|---|---|---|
| ಹೆಚ್.ಎಂ.ತಿಮ್ಮಪ್ಪ ಕಲಸಿ | ಹವ್ಯಕ ವಿಭೂಷಣ | ಸಾಹಿತ್ಯ |
| ಗಣೇಶ್ ಎಲ್.ಭಟ್ | ಹವ್ಯಕ ಭೂಷಣ | ಶಿಲ್ಪಶಾಸ್ತ್ರ |
| ಶಿವಾನಂದ ಕಳವೆ | ಹವ್ಯಕ ಭೂಷಣ | ಪರಿಸರ |
| ಗೋಪಾಲಕೃಷ್ಣ ದೇಲಂಪಾಡಿ | ಹವ್ಯಕ ಭೂಷಣ | ಯೋಗ |
| ಗಿರಿಧರ್ ದಿವಾನ್ | ಹವ್ಯಕ ಶ್ರೀ | ಛಾಯಾಗ್ರಹಣ, |
| ಗಣೇಶ್ ದೇಸಾಯಿ | ಹವ್ಯಕ ಶ್ರೀ | ಸಂಗೀತ |
| ಮಂಗಳ ಬಾಲಚಂದ್ರ | ಹವ್ಯಕ ಶ್ರೀ | ಸಂಗೀತ |
| ಕಾಂತ ಹೆಗಡೆ ಅಂತ್ರವಳ್ಳಿ | ಹವ್ಯಕ ಸೇವಾಶ್ರೀ | ಹವ್ಯಕ ಪತ್ರಿಕೆ |

# ಸಿಎಂ, ಡಿಸಿಎಂ, ರಾಹುಲ್‌ಗೆ ಸಮನ್ಸ್

## ಬಿಜೆಪಿ ವಿರುದ್ಧ 40 ಪರ್ಸೆಂಟ್ ಕಮಿಷನ್ ಜಾಹೀರಾತು

**ಬೆಂಗಳೂರು:** ಹಿಂದಿನ ಬಿಜೆಪಿ ಸರಕಾರದ ವಿರುದ್ಧ ವಿಧಾನಸಭೆ ಚುನಾವಣೆ ವೇಳೆ 40 ಪರ್ಸೆಂಟ್ ಕಮಿಷನ್ ಆರೋಪ ಮಾಡಿದ್ದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಜನಪ್ರತಿನಿಧಿಗಳ ನ್ಯಾಯಾಲಯ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಮನ್ಸ್ ಜಾರಿ ಮಾಡಿದೆ.

ಬಿಜೆಪಿ ವಿರುದ್ಧ 40 ಪರ್ಸೆಂಟ್ ಭ್ರಷ್ಟಾಚಾರದ ರೇಟ್ ಕಾರ್ಡ್ ಜಾಹೀರಾತು ನೀಡಿದ್ದಕ್ಕೆ ಸಂಬಂಧಪಟ್ಟಂತೆ ಬಿಜೆಪಿ ಸಲ್ಲಿಸಿದ್ದ ಮಾನನಷ್ಟ ಮೊಕದ್ದಮೆ ಪ್ರಕರಣದ ವಿಚಾರಣೆ ನಡೆಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಎ. 29ಕ್ಕೆ ಹಾಜರಾಗುವಂತೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರಿಗೆ ಸಮನ್ಸ್ ನೀಡಿದ್ದರೆ, ಜೂ. 1ಕ್ಕೆ ಹಾಜರಾಗುವಂತೆ ರಾಹುಲ್ ಗಾಂಧಿಗೆ ಸಮನ್ಸ್ ಜಾರಿ ಮಾಡಿದೆ. ಡಿಸಿಎಂಗೆ ಸಮನ್ಸ್ ಜಾರಿ ಮಾಡಲು ಸದಾಶಿವನಗರ ಪೊಲೀಸರಿಗೆ ಸೂಚನೆ ನೀಡಿದರೆ, ಸಿಎಂಗೆ ಸಮನ್ಸ್ ಜಾರಿ ಮಾಡಲು ಹೈಗ್ರೌಂಡ್ಸ್ ಪೊಲೀಸರಿಗೆ ನಿರ್ದೇಶನ ನೀಡಿದೆ.

### ಜಾಹೀರಾತು ವಿರುದ್ಧ ದೂರು ನೀಡಿದ್ದ ಬಿಜೆಪಿ

**ಕಳೆದ ವಿಧಾನಸಭಾ ಚುನಾವಣೆ ವೇಳೆ ಬಿಜೆಪಿ ಭ್ರಷ್ಟಾಚಾರ ಮಾಡಿದೆ ಎಂದು ಕಾಂಗ್ರೆಸ್ ಜಾಹೀರಾತು ಪ್ರಕಟಿಸಿದ್ದ ಪ್ರಕರಣಕ್ಕೆ ಸಂಬಂಧಿಸಿ ಬಿಜೆಪಿ ನ್ಯಾಯಾಲಯದಲ್ಲಿ ದೂರು ದಾಖಲಿಸಿತ್ತು. ಕೆಪಿಸಿಸಿ ಹಾಗೂ ಕಾಂಗ್ರೆಸ್ ನಾಯಕರು ಬಿಜೆಪಿ ವಿರುದ್ಧ ಸುಳ್ಳು ಆರೋಪಗಳ ಜಾಹೀರಾತು ನೀಡಿ ಪಕ್ಷದ ಗೌರವಕ್ಕೆ ಧಕ್ಕೆ ತಂದಿದ್ದಾರೆ. ಇದರಿಂದ ಪಕ್ಷಕ್ಕೆ ಹಾನಿಯಾಗಿದೆ. ಈ ನಿಟ್ಟಿನಲ್ಲಿ ಮಾನನಷ್ಟ ಮೊಕದ್ದಮೆ ದಾಖಲಿಸಿ ಕ್ರಮ ಕೈಗೊಳ್ಳಬೇಕು ಎಂದು ಕೋರಿ ನ್ಯಾಯಾಲಯದಲ್ಲಿ ರಾಜ್ಯ ಕಾರ್ಯದರ್ಶಿ ಎಸ್. ಶಿವಪ್ರಸಾದ್ ಖಾಸಗಿ ದೂರು ಸಲ್ಲಿಸಿದ್ದರು. ದೂರಿನಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ರಾಹುಲ್ ಗಾಂಧಿ, ಕೆಪಿಸಿಸಿ ಮತ್ತಿತರರನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿತ್ತು.**

# ದಾವೆ ರದ್ದುಪಡಿಸಲು ಹೈ ನಿರಾಕರಣೆ

## ಒಕ್ಕಲಿಗರ ಸಂಘದ ಮಾಜಿ ಅಧ್ಯಕ್ಷರ ವಿರುದ್ಧದ ಪ್ರಕರಣ

- **ವಿದ್ಯಾರ್ಥಿನಿಯಿಂದ ಹಣ ಸಂಗ್ರಹಿಸಿ ದುರುಪಯೋಗ**
- **ಡಾ.ಅಪ್ಪಾಜಿ ಗೌಡ ವಿರುದ್ಧದ ವಂಚನೆ ಹಾಗೂ ನಂಬಿಕೆ ದ್ರೋಹ ಎಸಗಿದ ಆರೋಪ**

**ಬೆಂಗಳೂರು:** ಕಾಲೇಜು ಅಭಿವೃದ್ಧಿ ಶುಲ್ಕ ಎಂಬುದಾಗಿ ವಿದ್ಯಾರ್ಥಿನಿಯಿಂದ ಹಣ ಸಂಗ್ರಹಿಸಿ ದುರುಪಯೋಗಪಡಿಸಿಕೊಂಡು ವಂಚನೆ ಹಾಗೂ ನಂಬಿಕೆ ದ್ರೋಹ ಎಸಗಿದ ಆರೋಪದ ಮೇಲೆ ರಾಜ್ಯ ಒಕ್ಕಲಿಗರ ಸಂಘದ ಮಾಜಿ ಅಧ್ಯಕ್ಷ ಡಾ. ಅಪ್ಪಾಜಿ ಗೌಡ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಪ್ರಕರಣ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿದೆ.



ಪ್ರಕರಣದಲ್ಲಿ ಮೊದಲನೇ ಆರೋಪಿಯಾಗಿರುವ ಅಪ್ಪಾಜಿ ಗೌಡ ಅವರು ತಮ್ಮ ವಿರುದ್ಧದ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯನ್ನು ನ್ಯಾಯಮೂರ್ತಿ ಎಸ್.ವಿಶ್ವಜಿತ್ ಶೆಟ್ಟಿ ಅವರಿದ್ದ ಏಕಸದಸ್ಯ ಪೀಠ ವಜಾಗೊಳಿಸಿತು. ಅರ್ಜಿದಾರರು ಸೇರಿದಂತೆ ಪ್ರಕರಣದ ಇತರೆ ಆರೋಪಿಗಳು ಒಕ್ಕಲಿಗರ ಸಂಘದ ಮಾಜಿ ಪದಾಧಿಕಾರಿಗಳಾಗಿದ್ದಾರೆ. ವಿದ್ಯಾರ್ಥಿನಿಯಿಂದ ಕಾಲೇಜು ಅಭಿವೃದ್ಧಿ ಶುಲ್ಕ ಸಂಗ್ರಹಿಸಿ, ಕೆಂಪೇಗೌಡ ವೈದ್ಯಕೀಯ ವಿಜ್ಞಾನಗಳ ಕಾಲೇಜು ನಡೆಸುತ್ತಿರುವ ಸಂಘಕ್ಕೆ ಪಾವತಿಸಿಲ್ಲ ಎಂಬುದು ಅರ್ಜಿದಾರರ ಮೇಲಿನ ಆರೋಪ. ದೂರು ಪರಿಶೀಲಿಸಿದಾಗ ಅರ್ಜಿದಾರರ ಮೇಲಿನ ಆರೋಪಗಳಲ್ಲಿ ಹುರುಳಿಲ್ಲ ಎಂದು ಮೇಲ್ನೋಟಕ್ಕೆ ಹೇಳಲು ಸಾಧ್ಯವಿಲ್ಲ. ಮೇಲಾಗಿ ವಿದ್ಯಾರ್ಥಿನಿಯಿಂದ ಸಂಗ್ರಹಿಸಿದ ಹಣವನ್ನು ಜೇಬಿಗಿಳಿಸಿ ನಂಬಿಕೆ ದ್ರೋಹ ಹಾಗೂ ವಂಚನೆ ಮಾಡಲಾಗಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಪೊಲೀಸರು ಈಗಾಗಲೇ ತನಿಖೆ ಪೂರ್ಣಗೊಳಿಸಿ ದೋಷಾರೋಪ ಪಟ್ಟಿ ಸಲ್ಲಿಸಿದ್ದು, ವಿಚಾರಣಾ ನ್ಯಾಯಾಲಯವು ಪ್ರಕರಣದ ವಿಚಾರಣೆ ನಡೆಸಬೇಕಿದೆ. ಆದ್ದರಿಂದ ಅರ್ಜಿದಾರರ ಮೇಲಿನ ದೂರು ರದ್ದುಪಡಿಸಲು ಅರ್ಹವಾಗಿಲ್ಲ ಎಂದು ತಿಳಿಸಿ ಪೀಠ ತಿಳಿಸಿದೆ.



ಮಂಡ್ಯ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರು ನಂಜನಗೂಡಿನ ಶ್ರೀ ನಂಜನುಂಡೇಶ್ವರ ದೇವಸ್ಥಾನಕ್ಕೆ ಗುರುವಾರ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

# ಕಪಿಲ್ ಮೋಹನ್ ವಿರುದ್ಧದ ಸಮನ್ಸ್ ರದ್ದು

**ಬೆಂಗಳೂರು:** ಅಕ್ರಮ ಹಣ ವರ್ಗಾವಣೆ ಕಾಯಿದೆ (ಪಿಎಂಎಲ್‌ಎ) ಕಾಯಿದೆಯಡಿ ನಿವೃತ್ತ ಐಎಎಸ್ ಅಧಿಕಾರಿ ಕಪಿಲ್ ಮೋಹನ್ ವಿರುದ್ಧ ಜಾರಿ ನಿರ್ದೇಶನಾಲಯ (ಇಡಿ) ದಾಖಲಿಸಿದ್ದ ಪ್ರಕರಣ ಮತ್ತು ಆ ಸಂಬಂಧ ಜಾರಿ ಮಾಡಿದ್ದ ಸಮನ್ಸ್‌ಅನ್ನು ಹೈಕೋರ್ಟ್ ರದ್ದುಗೊಳಿಸಿದೆ.

ಜಾರಿ ನಿರ್ದೇಶನಾಲಯ ದಾಖಲಿಸಿದ್ದ ಪ್ರಕರಣ

ಪಿಎಂಎಲ್‌ಎ ಸೆಕ್ಷನ್ 50ರ ಅಡಿ 2023ರ ಫೆ. 2ರಂದು ಇಡಿ ಜಾರಿ ಮಾಡಿದ್ದ ಸಮನ್ಸ್ ರದ್ದುಗೊಳಿಸುವಂತೆ ಕೋರಿ ಕಪಿಲ್ ಮೋಹನ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ವಿಶ್ವಜಿತ್ ಶೆಟ್ಟಿ ಅವರಿದ್ದ ಏಕಸದಸ್ಯ ಪೀಠ ಅಂಗೀಕರಿಸಿದೆ. ಲೋಕಾಯುಕ್ತ ಪೊಲೀಸರು ತನಿಖೆ ನಡೆಸಿದ ಬಳಿಕ ಸಲ್ಲಿಸಿದ್ದ ಬಿ ಅಂತಿಮ ವರದಿಯನ್ನು ವಿಚಾರಣಾಧೀನ ನ್ಯಾಯಾಲಯ ಒಪ್ಪಿಕೊಂಡಿದೆ. ಹೀಗಾಗಿ, ಅಂತಿಮ ವರದಿಗೆ ಸಂಬಂಧಿಸಿದ ಆದೇಶ ತಾರ್ಕಿಕ ಅಂತ್ಯ ಕಂಡಿದೆ ಎಂದು ಹೈಕೋರ್ಟ್ ತಿಳಿಸಿದೆ.

ಜಾರಿ ನಿರ್ದೇಶನಾಲಯ ಪ್ರತಿನಿಧಿಸಿದ್ದ ವಕೀಲ ಮಧುಕರ್ ದೇಶಪಾಂಡೆ ದೃಢೀಕೃತ ಅಪರಾಧದಲ್ಲಿ ಆರೋಪಿಗಳು ಭಾಗವಹಿಸಿರುವುದಕ್ಕೆ ಸಂಬಂಧಿಸಿದಂತೆ ಯಾವುದೇ ಸಕ್ಷಮ ನ್ಯಾಯಾಲಯವು ನಿರ್ಧರಿಸಿಲ್ಲ. ತನಿಖಾಧಿಕಾರಿ ಬಿ ಅಂತಿಮ ವರದಿ ಸಲ್ಲಿಸಿದ್ದಾರೆ ಎಂದ ಮಾತ್ರಕ್ಕೆ ವ್ಯಾಪ್ತಿ ಹೊಂದಿದ ನ್ಯಾಯಾಲಯ ನಿರ್ಧಾರ ಮಾಡಿದೆ ಎಂದಲ್ಲ ಎಂದು ಆಕ್ಷೇಪಿಸಿದ್ದರು.

# ಬ್ಯಾಲೆಟ್ ಪೇಪರ್ ಕನಸುಗಳ ಅಭಿವ್ಯಕ್ತಿಸುವ ಧ್ವನಿ


## ಎ.ಎಸ್.ಸಿ ಪದವಿ ಕಾಲೇಜಿನ ವಿದ್ಯಾರ್ಥಿಗಳಿಂದ ಮತದಾನ ಜಾಗೃತಿ ಜಾಥಾ

**ಬೆಂಗಳೂರು:** ಬಿಬಿಎಂಪಿ ಮತ್ತು ಎ.ಎಸ್.ಸಿ ಪದವಿ ಕಾಲೇಜಿನ ಸಹಯೋಗದಲ್ಲಿ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಸಾರ್ವಜನಿಕರಿಂದ ಮತದಾನ ಜಾಗೃತಿ ಜಾಥ ಆಯೋಜಿಸಲಾಗಿದ್ದು, ಈ ಜಾಥಾವು ಪೊಲೀಸ್ ಕ್ವಾಟ್ರಸ್ ಮತ್ತು ವಿವಿಧ ಬಡಾವಣೆಗಳ ಮೂಲಕ ಹಾದು ಹೋಯಿತು.

ಸ್ವೀಪ್ ನೋಡಲ್ ಅಧಿಕಾರಿ ಉಮೇಶ್ ಮಾತನಾಡಿ, ದೇಶದ ಚುನಾವಣೆ ಸಮೀಪಿಸುತ್ತಿದೆ ಗೋವಿಂದರಾಜ ನಗರದಲ್ಲಿ ಕಡಿಮೆ ಮತದಾನ ಆಗಿರುವ ಪೊಲೀಸ್ ಕಾಲೋನಿ 102 ಮತ್ತು 103 ಬೂತ್ ನಲ್ಲಿ ಈ ಬಾರಿ ಹೆಚ್ಚು ಮತದಾನವಾಗಬೇಕು ಎಂದು ಪ್ರತಿ ಮನೆಗಳಿಗೆ ಭೇಟಿ ನೀಡಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ನಮ್ಮ ಒಂದು ಮತ ದೇಶದ ಭವಿಷ್ಯವನ್ನು ರೂಪಿಸುತ್ತದೆ. ಮತ ಅಂದರೆ ಕೇವಲ ಬ್ಯಾಲೆಟ್ ಪೇಪರ್ ಮೇಲಿನ ಗುರುತು ಅಥವಾ ಇವಿಎಂ ಯಂತ್ರದ ಬಟನ್ ಒತ್ತುವುದು ಅಷ್ಟೇ ಅಲ್ಲ, ಅದು ನಮ್ಮ ದೇಶದ ಆಶೆ, ಆಕಾಂಕ್ಷೆ ಮತ್ತು ಕನಸುಗಳನ್ನು ಅಭಿವ್ಯಕ್ತಿಸುವ ಧ್ವನಿಯಾಗಿದೆ ಎಂದರು.

ಮತದಾನವನ್ನು ತೊರೆಯಬಾರದು ಅದುವೇ ಮಹಾಶಕ್ತಿಯಾಗಿದೆ ಎನ್ನುವ ಮಹಾತ್ಮಾ ಗಾಂಧಿಜಿಯವರ ಮಾತು ನಮಗೆ ನಮ್ಮ ಮತದ ಪ್ರಾಮಾಣಿಕತೆಯ ಅರಿವು ಮತ್ತು ಅದರ ಶಕ್ತಿಯ ಪರಿಚಯವನ್ನು ನೀಡುತ್ತದೆ. ಉತ್ತಮ ನಾಗರಿಕತೆಯ ದಾರಿಯಲ್ಲಿ ನಡೆಯಲು ನಮ್ಮ ಮತವು ಅತ್ಯಂತ ಶಕ್ತಿಶಾಲಿಯಾಗಿದೆ ಎಂದರು.

ಸಹಾಯಕ ಚುನಾವಣಾ ಅಧಿಕಾರಿ ನಾಗಪ್ರಶಾಂತ್, ಕಾರ್ಯಪಾಲಕ ಅಭಿಯಂತರ ಕೆ.ಎಸ್. ಪ್ರಕಾಶ್, ಸ್ವೀಪ್ ನೋಡಲ್ ಅಧಿಕಾರಿ ಉಮೇಶ್, ಎ.ಎಸ್.ಸಿ.ಪದವಿ ಕಾಲೇಜು ಪ್ರಾಂಶುಪಾಲ ರಾಮಕೃಷ್ಣ ಮುರುಳಿ, ಸಹಾಯಕ ಅಭಿಯಂತರ ರಾಕೇಶ್ ಯಾದವ್, ಕಂದಾಯ ಪರಿವೀಕ್ಷಕ ರಾಜೇಂದ್ರ, ರವಿರಾಜ್, ರಾಮಾಂಜೀ, ಮಮತಾ ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಮತದಾನ ಜಾಗೃತಿ ಜಾಥದಲ್ಲಿ ಪಾಲ್ಗೊಂಡಿದ್ದರು.



**ಪೊಳ್ಳು ಭರವಸೆಗಳು ಅಥವಾ ಅಬ್ಬರದ ಪ್ರಚಾರಗಳಿಗೆ ಮರುಳಾಗಬಾರದು, ಬದಲಿಗೆ, ನಮ್ಮ ದೇಶದ ಒಳಿತಿಗಾಗಿ ಪ್ರತಿಯೊಬ್ಬ ಅಭ್ಯರ್ಥಿಯ ಕಾರ್ಯಸೂಚಿ ಮತ್ತು ದೃಷ್ಟಿಯನ್ನು ಕೂಲಂಕಷವಾಗಿ ಪರಿಶೀಲಿಸಿ ಮತದಾನ ಮಾಡಬೇಕು.**

–ಉಮೇಶ್ ಸ್ವೀಪ್ ನೋಡಲ್ ಅಧಿಕಾರಿ

# ನೋಟಾ ಮತ ಚಲಾಯಿಸುವ ಚಿಂತನೆ

**ಬೆಂಗಳೂರು:** ಹಿರಿಯ ನಾಗರಿಕರನ್ನು ನಿರ್ಲಕ್ಷಿಸುತ್ತಿರುವ ಸರಕಾರದ ಧೋರಣೆಯನ್ನು ಖಂಡಿಸಿ ಲೋಕಸಭಾ ಚುನಾವಣೆಯಲ್ಲಿ ನೋಟಾ ಮತ ಚಲಾಯಿಸುವ ಬಗ್ಗೆ ಚಿಂತನೆ ನಡೆದಿದೆ ಎಂದು ಕರ್ನಾಟಕ ರಾಜ್ಯ ನಿವೃತ್ತ ಸರಕಾರಿ ನೌಕರರ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘ ತಿಳಿಸಿದೆ.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಬಿ.ಎ. ಪಾಟೀಲ, ಹಿರಿಯ ನಾಗರಿಕರನ್ನು ಕಾನೂನು ಬದ್ಧವಾಗಿ ರಾಷ್ಟ್ರದ ಸಂಪತ್ತು ಎಂದು ಘೋಷಿಸಬೇಕು. ಎಲ್ಲ ಹಿರಿಯ ನಾಗರಿಕರಿಗೆ ಪ್ರತಿ ತಿಂಗಳು ₹10 ಸಾವಿರ ಸಹಾಯ ಧನ, ಉಚಿತ ವೈದ್ಯಕೀಯ ಚಿಕಿತ್ಸೆ, ಜೀವವಿಮಾ ಸೌಲಭ್ಯ ನೀಡಬೇಕು. ಕೇಂದ್ರ ಮತ್ತು ರಾಜ್ಯದಲ್ಲಿ ಹಿರಿಯ ನಾಗರಿಕರಿಗಾಗಿ ಪ್ರತ್ಯೇಕ ಇಲಾಖೆಯನ್ನು ಸ್ಥಾಪಿಸಬೇಕು ಎಂದು ಆಗ್ರಹಿಸಿದರು.

ಹಿರಿಯ ನಾಗರಿಕರ ರೈಲ್ವೆ ರಿಯಾಯತಿಯನ್ನು ತಕ್ಷಣ ಮರುಜಾರಿಗೊಳಿಸಬೇಕು. ಎಲ್ಲ ಪೊಲೀಸ್ ಠಾಣೆಗಳಲ್ಲಿ ಹಿರಿಯ ನಾಗರಿಕರ ಸಮಿತಿ ರಚಿಸಿ, ಹಿರಿಯ ನಾಗರಿಕರ ಮೇಲೆ ಆಗುವ ದೌರ್ಜನ್ಯಗಳನ್ನು ತಡೆಗಟ್ಟಬೇಕು. ಸರಕಾರಿ ಬಸ್‌ಗಲ್ಲಿ ಉಚಿತ ಪ್ರಯಾಣದ ಸೌಲಭ್ಯ ಕಲ್ಪಿಸಬೇಕು. ಎಲ್ಲ ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳಲ್ಲಿ ಪ್ರತ್ಯೇಕ ಹಿರಿಯ ನಾಗರಿಕರ ಭವನ ನಿರ್ಮಿಸಬೇಕು ಎಂದು ಒತ್ತಾಯಿಸಿದರು.

ಇದೇ 30ರಂದು ಬೆಂಗಳೂರಿನ ಜಯನಗರದ ಸಾಂಸ್ಕೃತಿಕ ಮತ್ತು ನಾಗರಿಕರ ಸಂಸ್ಥೆಯಲ್ಲಿ ನಡೆಯುವ ಸಭೆಯಲ್ಲಿ ನೋಟಾ ಮತ ಚಲಾಯವಣೆಯ ಬಗ್ಗೆ ನಿರ್ಣಯ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.